<u>ಕರ್ನಾಟಕ ಲೋಕಾಯುಕ್ತ</u>

ನಂ. ಕಂಪ್ಲೆಂಟ್/ಉಪಲೋಕ್/ಬಿಡಿ/1077/2021
ಮಂಡನಾಧಿಕಾರಿಗಳ ಶಾಖೆ ಎ.ಆರ್.ಇ.17

ಬಹುಮಹಡಿಗಳ ಕಟ್ಟಡ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು,
ದಿನಾಂಕ: 12/10/2021

<u>ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 12(3)ರ ಅನ್ವಯ ವರದಿ</u>

*****

ವಿಷಯ: ಸರ್ಕಾರಿ ನೌಕರರಾದ ಡಾ. ವೆಂಕಟೇಶ್ ಮೂರ್ತಿ ಎನ್. ಬಿನ್ ಲೇಟ್ ನರಸಪ್ಪ, ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಅಭಿವೃದ್ಧಿ ಇಲಾಖೆ, ಕೋಲಾರ ರವರು ಕರ್ತವ್ಯ ಲೋಪ/ದುರ್ನಡತೆ ಎಸಗಿರುವ ಬಗ್ಗೆ.

*****

1) ಪೊಲೀಸ್ ನಿರೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಕೋಲಾರ (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ.) ಸಲ್ಲಿಸಿದ ತನಿಖಾ ವರದಿ ಹಾಗೂ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದಾಗ, ಡಾ. ವೆಂಕಟೇಶ್ ಮೂರ್ತಿ ಎನ್. ಬಿನ್ ಲೇಟ್ ನರಸಪ್ಪ, ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಅಭಿವೃದ್ಧಿ ಇಲಾಖೆ, ಕೋಲಾರ. ಸ್ವಂತ ಸ್ಥಳ: ಕೆ.ಎಸ್.ಆರ್.ಟಿ.ಸಿ. ಗ್ಯಾರೇಜ್ ಹಿಂಭಾಗ, ಪ್ರಶಾಂತ ನಗರ ಬಡಾವಣೆ, ಚಿಕ್ಕಬಳ್ಳಾಪುರ ಟೌನ್, ಚಿಕ್ಕಬಳ್ಳಾಪುರ ಇವರನ್ನು (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ದೂರುದಾರರಾದ ಶ್ರೀ ಸೋಮಶೇಖರ್ ಆರ್ ಬಿನ್ ರವಿಕುಮಾರ್, ವ್ಯವಸ್ಥಾಪಕರು, ಶ್ರೀ ಕೃಷ್ಣ ಟ್ರೇಡರ್ಸ್, ವಾಸ: ನಂ. 171, ಜೇಮ್ಸ್ ರೋಡ್, ಕಮ್ಮನಹಳ್ಳಿ, ಬೆಂಗಳೂರು-560 048 (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲಡುತ್ತಾರೆ) ಇವರು ಭೇಟಿ ಮಾಡಿದಾಗ ಲಂಚದ ಹಣಕ್ಕೆ ಬೇಡಿಕೆ ಇಟ್ಟು ಅದನ್ನು ಪಡೆದು ದುರ್ನಡತೆ ತೋರಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 7(2) ರನ್ವಯ ಗೌರವಾನ್ವಿತ ಉಪಲೋಕಾಯುಕ್ತರವರು ಸ್ವಯಂ ಪ್ರೇರಿತ ತನಿಖೆ ಕೈಗೊಂಡಿರುತ್ತಾರೆ.

2) ದೂರಿನ ಸಂಕ್ಷಿಪ್ತ ವಿವರಣೆ:- ದೂರುದಾರರಾದ ಶ್ರೀ ಸೋಮಶೇಖರ್ ಆರ್, ಇವರಿಗೆ ಸಮಾಜ ಕಲ್ಯಾಣ ಇಲಾಖೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಗಳ ವ್ಯಾಪ್ತಿಯಲ್ಲಿರುವ ಮೆಟ್ರಿಕ್

ಪೂರ್ವ, ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಆಹಾರ ಸಾಮಗ್ರಿಗಳನ್ನು ಸರಬರಾಜು ಮಾಡುವ ಟೆಂಡರ್ ಮಂಜೂರಾಗಿದ್ದು ಸದರಿ ಆಹಾರ ಸಾಮಗ್ರಿಗಳ ಸರಬರಾಜಿಗೆ ಪರಿಶೀಲನಾ ಸಭೆಯ ನಡಾವಳಿಗಳಿಗೆ ಸಹಿ ಮಾಡಲು ಎದುರುದಾರರು ದೂರುದಾರರಿಗೆ ಐದು ಲಕ್ಷ ರೂಪಾಯಿಗಳ ಬೇಡಿಕೆ ಇಟ್ಟಿದ್ದು ಇರುತ್ತದೆ. ಸದರಿ ಆಹಾರ ಸಾಮಗ್ರಿಗಳನ್ನು ಸರಬರಾಜು ಮಾಡುವ ಸಂಬಂಧ ಇಂಡೆಂಟ್ (ಬೇಡಿಕೆ ಪಟ್ಟಿ) ಕೊಡಿಸಿ ಕೊಡುವ ಸಲುವಾಗಿ ದೂರುದಾರರಿಗೆ ಸ್ನೇಹಿತನಾದ ಶ್ರೀ ಸೋಮನಾಥ ಅಡಿಗೆ ಕೆಲಸದವರ ಮುಖಾಂತರ ಎರಡು ಲಕ್ಷ ರೂಪಾಯಿ ಹಣದ ಬೇಡಿಕೆ ಇಟ್ಟಿದ್ದು ಇರುತ್ತದೆ. ಆದ್ದರಿಂದ ದೂರುದಾರರು ಲಂಚದ ಹಣ ನೀಡಲು ಇಷ್ಟವಿಲ್ಲದ ಕಾರಣ ದೂರನ್ನು ನೀಡಿರುತ್ತಾರೆ. ಈ ಬಗ್ಗೆ ಕೋಲಾರ ಜಿಲ್ಲೆಯ ಭ್ರಷ್ಟಾಚಾರ ನಿಗ್ರಹದಳ ಪೊಲೀಸ್ ಠಾಣೆಯ ಅಧಿಕಾರಿಯವರು ತಮ್ಮ ಠಾಣೆಯ ಗುನ್ನೆ ನಂ. 01/2016 ರಲ್ಲಿ ಪ್ರಕರಣ ನೋಂದಾಯಿಸಿಕೊಂಡಿರುತ್ತಾರೆ.

3) ತನಿಖಾಧಿಕಾರಿಗಳು ದಿನಾಂಕ 19/07/2016 ರಂದು ನೆರಳು ಸಾಕ್ಷಿ ಹಾಗೂ ಸಹ ಪಂಚರನ್ನು ಬರ ಮಾಡಿಕೊಂಡು ದೂರುದಾರರನ್ನು ಪರಿಚಯಿಸಿ ಅವರಿಗೆ ದೂರಿನ ವಿಷಯವನ್ನು ತಿಳಿಸಿ ನಂತರ ಎದುರುದಾರರು ಮತ್ತು ದೂರುದಾರರ ನಡುವೆ ನಡೆದಿರುವ ಫೋನ್ ಸಂಭಾಷಣೆಯನ್ನು ಮತ್ತು ಸೋಮನಾಥ ಅಡಿಗೆ ಕೆಲಸಗಾರ ಮತ್ತು ವೆಂಕಟೇಶಮೂರ್ತಿರವರ ಮಧ್ಯ ಲಂಚದ ಹಣದ ವಿಚಾರವಾಗಿ ನಡೆದಿರುವ ಸಂಭಾಷಣೆಯನ್ನು ಡಾಟಾ ಕೇಬಲ್‌ನ ಸಹಾಯದಿಂದ ಲ್ಯಾಪ್‌ಟಾಪ್ ಮೂಲಕ ಸಿ.ಡಿ.ಗೆ ಕಾಪಿ ಮಾಡಿಸಿ, ಸದರಿ ಸಿ.ಡಿ.ಯನ್ನು ಕೇಳಿ ತಿಳಿದು ಲಿಪಿಕರಣ ಮಾಡಿ ಪಂಚರ ಸಮಕ್ಷಮ ಸಿ.ಡಿ.ಯನ್ನು ವಶಪಡಿಸಿಕೊಂಡಿರುತ್ತಾರೆ. ನಂತರ ಲಂಚದ ಹಣ ರೂ. 2,00,000/- ದೂರುದಾರರು ಹಾಜರುಪಡಿಸಿದ್ದು ಅವುಗಳ ಮುಖಬೆಲೆ ಮತ್ತು ನೋಟಿನ ಸಂಖ್ಯೆ ಪ್ರತ್ಯೇಕ ಹಾಳೆಯಲ್ಲಿ ನಮೂದಿಸಿ ಪಂಚರ ಮತ್ತು ತನಿಖಾಧಿಕಾರಿಗಳ ಸಹಿ ಪಡೆಯಲಾಯಿತು. ಸದರಿ ಹಣಕ್ಕೆ ಫಿನಾಫ್ತಲಿನ್ ಪೌಡರ್ ಲೇಪಿಸಿ ಸೋಡಿಯಂ ಕಾರ್ಬೋನೇಟ್ ದ್ರಾವಣ ತಯಾರಿಸಿ ಸದರಿ ದ್ರಾವಣದಲ್ಲಿ ನೋಟುಗಳಿಗೆ ಫಿನಾಫ್ತಲಿನ್ ಪೌಡರ್ ಲೇಪಿಸಿದ ಪಂಚನ ಕೈ ಬೆರಳುಗಳನ್ನು ದ್ರಾವಣದಲ್ಲಿ ಅದ್ದಿ ತೆಗೆದಾಗ ಅದು ತಿಳಿ ಗುಲಾಬಿ ಬಣ್ಣಕ್ಕೆ ಬಂದಿರುತ್ತದೆ. ಈ ಬಗ್ಗೆ ಮಾದರಿ ದ್ರಾವಣ ಹಾಗೂ ಗುಲಾಬಿ ಬಣ್ಣಕ್ಕೆ ತಿರುಗಿದ ದ್ರಾವಣವನ್ನು ಪ್ರತ್ಯೇಕವಾಗಿ ವಶಪಡಿಸಿಕೊಂಡು ಹಂತ ಹಂತವಾಗಿ ಫೋಟೋಗಳನ್ನು ತೆಗೆಸಿ ಪ್ರಕರಣದ ಮಾಹಿತಿ ಗೌಪ್ಯತೆಯನ್ನು ಕಾಪಾಡಿಕೊಳ್ಳಲು ತನಿಖಾಧಿಕಾರಿಯವರು ಸೂಚಿಸಿರುತ್ತಾರೆ. ಶ್ರೀ ಎಂ.

ಚಂದ್ರಶೇಖರ ಪ್ರ.ದ.ಸ. ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೋಲಾರ ಇವರನ್ನು ನೆರಳು ಸಾಕ್ಷಿಯಾಗಿ ನೇಮಿಸಿ ದೂರುದಾರರೊಂದಿಗೆ ಎದುರುದಾರರ ಬಳಿ ಹೋಗಿ ಅವರಿಗೆ ಅನುಮಾನ ಬಾರದಂತೆ ಎದುರುದಾರರು ಹಾಗೂ ದೂರುದಾರರ ನಡುವೆ ನಡೆದ ಸಂಭಾಷಣೆಯನ್ನು ಕೇಳಿಸಿಕೊಂಡು ಘಟನೆಯನ್ನು ವೀಕ್ಷಿಸಿ, ಎದುರುದಾರರು ಹಣವನ್ನು ಕೇಳಿ ಪಡೆದುಕೊಂಡರೆ, ಹಣವನ್ನು ಹೇಗೆ ಪಡೆದುಕೊಳ್ಳುತ್ತಾರೆ, ಹಣವನ್ನು ಎಲ್ಲಿ ಇಟ್ಟುಕೊಳ್ಳುತ್ತಾರೆ ಎಂಬುದನ್ನು ಗಮನಿಸಿ ನಂತರ ತಿಳಿಸಬೇಕೆಂದು ತನಿಖಾಧಿಕಾರಿಯವರು ತಿಳಿಸಿರುತ್ತಾರೆ. ದೂರುದಾರರಿಗೆ ಎದುರುದಾರರು ಲಂಚದ ಹಣ ಬೇಡಿಕೆ ಇಟ್ಟು ಸ್ವೀಕರಿಸಿದ ನಂತರ ತನ್ನ ತಲೆ ಸವರುವುದರ ಮೂಲಕ ಸೂಚನೆ ನೀಡಬೇಕೆಂದು ಸೂಚಿಸಿರುತ್ತಾರೆ. ಈ ಬಗ್ಗೆ ಸವಿಸ್ತಾರ ಪ್ರಾಯೋಗಿಕ ಪಂಚನಾಮೆಯನ್ನು ನಿರ್ವಹಿಸಿರುತ್ತಾರೆ.

4) ನಂತರ ದೂರುದಾರರು ಎದುರುದಾರರು ವಾಸವಿರುವ ಕೋಲಾರದ ಕಾರಂಜಿ ಕಟ್ಟೆ ಬಡಾವಣೆಯ, 7ನೇ ಕ್ರಾಸ್ ನಲ್ಲಿರುವ ಮನೆಯಲ್ಲಿಯೇ ನೆರಳು ಸಾಕ್ಷಿ ಶ್ರೀ ಎಂ. ಚಂದ್ರಶೇಖರ್ ಸಮಕ್ಷಮ ಭೇಟಿ ಮಾಡಿದಾಗ ಎರಡು ಲಕ್ಷ ರೂಪಾಯಿ ಲಂಚದ ಹಣವುಳ್ಳ ಕವರನ್ನು ಎದುರುದಾರರು ದೂರುದಾರರಿಂದ ಪಡೆದು, ಕವರನ್ನು ತೆರೆದು ನೋಟನ್ನು ಕೈಗಳಿಂದ ಎಣಿಸಿ ಅದೇ ಕವರಿಗೆ ಹಾಕಿ ತನ್ನ ಮುಂದೆ ಇದ್ದ ಟೇಬಲ್ ಮೇಲೆ ಇಟ್ಟುಕೊಂಡಿದ್ದು ಇರುತ್ತದೆ. ನಂತರ ದೂರುದಾರರು ಮನೆಯ ಪ್ಯಾಸೇಜಿಗೆ ಬಂದು ತಲೆ ಸವರಿಕೊಳ್ಳುವ ಮೂಲಕ ತನಿಖಾಧಿಕಾರಿಯವರಿಗೆ ಸೂಚನೆ ನೀಡಿರುತ್ತಾರೆ. ನಂತರ ತನಿಖಾಧಿಕಾರಿಗಳು ಎದುರುದಾರರು ವಾಸವಿರುವ ಕೋಲಾರದ ಕಾರಂಜಿ ಕಟ್ಟೆ ಬಡಾವಣೆಯ, 7ನೇ ಕ್ರಾಸ್ ನಲ್ಲಿರುವ ಮನೆಗೆ ತನಿಖಾಧಿಕಾರಿ, ಸಹ ಪಂಚ ಮತ್ತು ಸಿಬ್ಬಂಧಿಯವರೊಂದಿಗೆ ಬಂದು ಅಲ್ಲಿಯ ವಿದ್ಯಮಾನಗಳನ್ನು ತಿಳಿದು ಎದುರುದಾರರ ಎರಡೂ ಕೈ ಬೆರಳುಗಳನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣಗಳಲ್ಲಿ ಪ್ರತ್ಯೇಕವಾಗಿ ಅದ್ದಿದಾಗ ಅವು ಗುಲಾಬಿ ಬಣ್ಣಕ್ಕೆ ತಿರುಗಿದ್ದು ಸದರಿ ದ್ರಾವಣದ ಮಾದರಿಯನ್ನು ಖಾಲಿ ಬಾಟಲ್‌ಗಳಲ್ಲಿ ಹಾಕಿ ಸೀಲ್ ಮಾಡಿ ವಶಕ್ಕೆ ಪಡೆದಿರುತ್ತಾರೆ. ಎದುರುದಾರರಿಂದ ಫಿನಾಪ್ತಲಿನ್ ಪೌಡರ್ ಲೇಪಿತ ಲಂಚದ ಹಣ ರೂ. 2,00,000/- ಗಳನ್ನು ಪಂಚರ ಸಮಕ್ಷಮ ವಶಪಡಿಸಿಕೊಂಡು ಸವಿಸ್ತಾರವಾದ ಜಪ್ತಿ ಪಂಚನಾಮೆ ಬರೆದಿರುತ್ತಾರೆ.

4) ರಾಸಾಯನಿಕ ತಜ್ಞರ ಪರೀಕ್ಷಾ ವರದಿಯಲ್ಲಿ ಎದುರುದಾರರಿಂದ ಸಂಗ್ರಹಿಸಿದ ದ್ರಾವಣ/ ವಸ್ತುಗಳಲ್ಲಿ ಫಿನಾಪ್ತಲಿನ್ ಅಂಶ ದೃಢಪಟ್ಟಿದ್ದು ಇರುತ್ತದೆ.

5) ಈ ಪ್ರಕರಣದಲ್ಲಿ ಪರಿವೀಕ್ಷಣಾ ಟಿಪ್ಪಣಿಯ ಮೇಲೆ ಎದುರುದಾರರಿಂದ ಸಮಜಾಯಿಸಿಯನ್ನು ದಿನಾಂಕ 05/07/2021 ರಂದು ಕೇಳಲಾಗಿತ್ತು. ಅದಕ್ಕೆ ಎದುರುದಾರರು ತಮ್ಮ ಸಮಜಾಯಿಸಿಯನ್ನು ದಿನಾಂಕ 22/07/2021 ರಂದು ಸಲ್ಲಿಸಿರುತ್ತಾರೆ. ಸದರಿ ಸಮಜಾಯಿಸಿಯನ್ನು ದಾಖಲಾತಿಗಳೊಂದಿಗೆ ಪರಿಶೀಲಿಸಲಾಗಿ ಎದುರುದಾರರು ತಮ್ಮ ಮೇಲೆ ಸ್ಪೆಶಲ್ ಕೇಸ್ ನಂ. 5/2017 ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ವಿಚಾರಣೆ ನಡೆಯುತ್ತಿದೆ. ದೂರುದಾರರು ಶ್ರೀ ಕೃಷ್ಣಾ ಟ್ರೇಡರ್ಸ್ ಕೋಲಾರದಲ್ಲಿ ಮೆನೇಜರ್ ಆಗಿ ಕಾರ್ಯ ನಿರ್ವಹಿಸಿರುವ ಬಗ್ಗೆ ಅಧಿಕೃತ ದಾಖಲೆಯನ್ನು ಹೊಂದಿರುವುದಿಲ್ಲ. ಮತ್ತು ಸದರಿಯವರು ಯಾವುದೇ ಉದ್ಯೋಗವನ್ನು ಮಾಡುತ್ತಿರಲಿಲ್ಲ. ದೂರುದಾರರು ದಿನಾಂಕ 19/07/2016 ರಂದು ಖುದ್ದು ತಮ್ಮನ್ನು ಮುಖಾ ಮುಖಿ ಭೇಟಿಯಾಗಿರುವುದಿಲ್ಲ. ಎದುರುದಾರರು ಅಡಿಗೆ ಕೆಲಸದವರ ಮುಖಾಂತರ 2,00,000/- ರೂ. ಹಣದ ಬೇಡಿಕೆ ಇಟ್ಟಿರುವುದಿಲ್ಲ ಎಂದು ತಿಳಿಸಿ ಕ್ರಿಮಿನಲ್ ಪ್ರಕರಣದಲ್ಲಿ ಸಾಕ್ಷಿಗಳ ವಿಚಾರಣೆಯಾದ ಸಾಕ್ಷ್ಯ ಪತ್ರವನ್ನು ಹಾಜರುಪಡಿಸಿರುತ್ತಾರೆ. ಆದರೆ ಕ್ರಿಮಿನಲ್ ಪ್ರಕರಣದ ವಿಚಾರಣೆ ಹಾಗೂ ಇಲಾಖಾ ಶಿಸ್ತು ಕ್ರಮದ ವಿಚಾರಣೆ ಪ್ರತ್ಯೇಕವಾಗಿರುತ್ತದೆ. ಆದ್ದರಿಂದ ಎದುರುದಾರರು ನೀಡಿರುವ ಸಮಜಾಯಿಸಿ ಅಂಶಗಳ ಮೇರೆಗೆ ವಿಚಾರಣೆಯನ್ನು ಮುಕ್ತಾಯಗೊಳಿಸಲು ಸೂಕ್ತ ಕಾರಣಗಳು ಕಂಡುಬರುವುದಿಲ್ಲ.

6) ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು, ಎದುರುದಾರರ ಸತತವಾದ ದುರ್ನಡತೆಯನ್ನು ತೋರಿಸುತ್ತದೆ.

7) ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳನ್ನು ಮತ್ತು ಎದುರುದಾರರು ನೀಡಿರುವ ಉತ್ತರಗಳನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರು ತಮ್ಮ ವಿರುದ್ಧದ ನಡವಳಿಯನ್ನು ಕೈ ಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ತೋರಿಸಿಲ್ಲವೆಂದು ಅಭಿಪ್ರಾಯಕ್ಕೆ ಬರಲಾಗಿದೆ.

8) ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರಿಸದೆ, ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ.

9) ಆದ್ದರಿಂದ, ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ (ಪ್ರಸ್ತುತ ಕರ್ನಾಟಕ ನಾಗರಿಕ ಸೇವಾ(ನಡತೆ) 2021 ನಿಯಮ 3 (1) (i) ರಿಂದ (iii) ರ ಉಲ್ಲಂಘನೆಗಾಗಿ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ

ಲೋಕಾಯುಕ್ತ ಕಾಯಿದೆ ಕಲಂ 12(3) ರ ಅಡಿ ಪ್ರದತ್ತವಾದ ಅಧಿಕಾರದಡಿ, ಈ ವರದಿಯ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಹಾಗೂ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14(ಎ) ರಡಿ ಉಪಲೋಕಾಯುಕ್ತರಿಗೆ ವಹಿಸಬೇಕೆಂದೂ ಕೋರಿದೆ.

10) ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4) ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಮೂರು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

12/10/21

**(ನ್ಯಾಯಮೂರ್ತಿ ಬಿ.ಎಸ್. ಪಾಟೀಲ್)**
ಉಪಲೋಕಾಯುಕ್ತರು-2
ಕರ್ನಾಟಕ ರಾಜ್ಯ, ಬೆಂಗಳೂರು.